

ಅರುಣ ಪಿ. ಭಟ್ಟ




## ವಾರಭವಿಷ್ಯ: 09.10.2025ರಿಂದ 15.10.2025ರವರೆಗೆ




ಕಾನೂನು ವ್ಯಾಜ್ಯಗಳಿದ್ದಲ್ಲಿ ಅದನ್ನು ನಿವಾರಿಸಿಕೊಳ್ಳಲು ಸೂಕ್ತ ವೇದಿಕೆ ದೊರೆಯಲಿದೆ. ಖಾಸಗಿ ಕೆಲಸ ಕಾರ್ಯಗಳಲ್ಲಿ ಪ್ರಗತಿ ಇದೆ. ಪ್ರೀತಿಪಾತ್ರರ ಜತೆಗೆ ಬಾಂಧವ್ಯ ಮತ್ತಷ್ಟು ಗಟ್ಟಿಯಾಗಲಿದೆ. ಸಹೋದ್ಯೋಗಿಗಳ ಜತೆ ಉತ್ತಮ ಬಾಂಧವ್ಯ ಇರುತ್ತದೆ. ಆರೋಗ್ಯ ಉತ್ತಮವಾಗಿದ್ದು, ಚೈತನ್ಯ ಇರುತ್ತದೆ. ವೈಯಕ್ತಿಕ ಸಂಬಂಧದಲ್ಲಿ ಏರಿಳಿತಗಳಿರುತ್ತವೆ. ಶುಭದಿನ: 12. ಸೌಂದರ್ಯ ಲಹರಿ ಪಠಿಸಿರಿ.




ವಾರದ ಶುರುವಿನಲ್ಲಿ ವೈವಾಹಿಕ ಜೀವನ ಸಂತೋಷವಾಗಿರುತ್ತದೆ. ಸಂಗಾತಿ ಜತೆಗೆ ಈ ಹಿಂದೆ ಮನಸ್ತಾಪ ಇದ್ದಲ್ಲಿ ನಿವಾರಣೆ ಆಗುತ್ತದೆ. ನೀವು ಕೆಲಸ ಮಾಡುವ ಸಂಸ್ಥೆ ಮುನ್ನಡೆಸುವುದರಲ್ಲಿ ಮಹತ್ವದ ಪಾತ್ರವನ್ನು ವಹಿಸಲಿದ್ದೀರಿ. ಪ್ರೀತಿಪಾತ್ರರ ಜತೆ ಬಾಂಧವ್ಯ ಗಟ್ಟಿಯಾಗಲಿದೆ. ಆರೋಗ್ಯ ಉತ್ತಮವಾಗಿರುತ್ತದೆ. ವಾರದ ಮಧ್ಯ ಭಾಗದಲ್ಲಿ ಸಮಸ್ಯೆ ಎದುರಾಗಬಹುದು. ಶುಭದಿನ: 15. ಹನುಮಾನ್ ಚಾಲೀಸ್ ಪಠಿಸಿರಿ.





ವೃತ್ತಿರಂಗದಲ್ಲಿ ಹಲವು ಮಹತ್ತರವಾದ ಅವಕಾಶಗಳು ದೊರಕುತ್ತವೆ. ಅತ್ಯುತ್ತಮ ಫಲಿತಾಂಶ ದೊರೆಯಲಿದೆ. ವಾರದ ಮೊದಲ ಭಾಗದಲ್ಲಿ ಆದಾಯವು ಏರಿಕೆ ಆಗಲಿದೆ. ವಾರದ ದ್ವಿತೀಯಾರ್ಧದಲ್ಲಿ ಪ್ರೀತಿಪಾತ್ರರ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಕೌಟುಂಬಿಕ ಸಮಸ್ಯೆಗಳನ್ನು ತಾಳ್ಮೆಯಿಂದ ಬಗೆಹರಿಸಿಕೊಳ್ಳಲಿದ್ದೀರಿ. ವ್ಯವಹಾರಗಳಲ್ಲಿ ಹೊಸ ಎತ್ತರಕ್ಕೆ ಏರಲಿದ್ದೀರಿ. ಶುಭದಿನ: 13. ಚಂಡಿ ಪಾರಾಯಣ ಮಾಡಿರಿ.





ವ್ಯಾಪಾರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರು ಅತ್ಯುತ್ತಮ ಫಲಿತಾಂಶ ಪಡೆಯಲಿದ್ದಾರೆ. ಕಚೇರಿಯಲ್ಲಿ ಬದಲಾವಣೆ ತರುವುದಕ್ಕೆ ಹಣ ಖರ್ಚು ಮಾಡಲಿದ್ದೀರಿ. ಆರೋಗ್ಯ ಮತ್ತು ದೈಹಿಕ ದೃಢತೆ ಚೆನ್ನಾಗಿರಲಿದೆ. ವೃತ್ತಿಪರ ಕೌಶಲವನ್ನು ಹೆಚ್ಚಿಸಿಕೊಳ್ಳಲು ಅವಕಾಶ ದೊರೆಯಲಿದೆ. ಆದರೆ ಅದಕ್ಕೆ ನೀವು ಹೆಚ್ಚಿನ ಶ್ರಮ ಹಾಕಬೇಕಾಗುತ್ತದೆ. ಶುಭದಿನ: 12. ಶ್ರೀರಾಮ ರಕ್ಷಾ ಸ್ತೋತ್ರ ಪಠಿಸಿರಿ.




ಹಲವು ಸಕಾರಾತ್ಮಕ ಬದಲಾವಣೆಗೆ ಸಾಕ್ಷಿಯಾಗಲಿದ್ದೀರಿ. ಕಾರ್ಯ ನಿರ್ವಹಿಸುವವರಿಗೆ ಏಳ್ಗೆ ಇದೆ. ದಾನ ಧರ್ಮದಲ್ಲಿ ಪಾಲ್ಗೊಳ್ಳಲಿದ್ದೀರಿ. ಇಷ್ಟದ ವಸ್ತುಗಳನ್ನು ಖರೀದಿ ಮಾಡುವ ಸಾಧ್ಯತೆಗಳಿವೆ. ಉದ್ಯೋಗಕ್ಕಾಗಿ ಹುಡುಕಾಟ ನಡೆಸುತ್ತಿರುವವರಿಗೆ ಯಶಸ್ಸು ದೊರೆಯಲಿದೆ. ಆದರೆ ಇದಕ್ಕಾಗಿ ಮನಸಾರೆ ಪ್ರಯತ್ನಿಸಬೇಕು. ಮಕ್ಕಳ ಪ್ರಗತಿಯಿಂದ ಸಂತಸ ಉಂಟಾಗಲಿದೆ. ಶುಭದಿನ: 10. ಗಣಪತಿ ಸುಬ್ರಮಣ್ಯ ಜಪ ಮಾಡಿರಿ.





ವಾರದ ಶುರುವಿನಿಂದಲೇ ಸಂಬಂಧಿಗಳೊಂದಿಗೆ ಬಾಂಧವ್ಯ ಗಟ್ಟಿಯಾಗಲಿದೆ. ಕುಟುಂಬದಲ್ಲಿ ಸಂತಸದ ವಾತಾವರಣ ಇರಲಿದೆ. ಆದರೆ ಆರೋಗ್ಯಕ್ಕೆ ಸಂಬಂಧಿಸಿದಂತೆ ಕೆಲ ಸಮಸ್ಯೆ ಕಾಣಿಸಿಕೊಳ್ಳಬಹುದು. ವ್ಯವಹಾರಗಳಲ್ಲಿ ದೊಡ್ಡ ಮಟ್ಟದ ಲಾಭ ದೊರೆಯುವ ಅವಕಾಶಗಳಿವೆ. ವಾರದ ಮಧ್ಯ ಭಾಗದಲ್ಲಿ ಅದೃಷ್ಟದ ಬೆಂಬಲ ಇರುತ್ತದೆ. ಶುಭದಿನ: 14. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.





ಮಾರಾಟ ಹಾಗೂ ಅಭಿವೃದ್ಧಿ ಕ್ಷೇತ್ರದಲ್ಲಿ ಅಂದುಕೊಂಡ ಗುರಿಯೆಡೆಗೆ ಸಾಗಬಹುದು. ಉದ್ಯಮ ವಿಸ್ತರಣೆಗೆ ಕೈಗೊಂಡ ಪ್ರಯತ್ನಗಳಲ್ಲಿ ಯಶಸ್ವಿ ಆಗಲಿದ್ದೀರಿ. ಆರೋಗ್ಯ ಸಮಸ್ಯೆಗಳು ಇದ್ದಲ್ಲಿ ನಿವಾರಣೆ ಆಗಲಿದೆ. ವಾರದ ದ್ವಿತೀಯಾರ್ಧದಲ್ಲಿ ಹಲವು ಕೆಲಸಗಳನ್ನು ಅಂದುಕೊಂಡಂತೆಯೇ ಪೂರ್ಣಗೊಳಿಸಲು ತಂತ್ರಗಳನ್ನು ರೂಪಿಸಲಿದ್ದೀರಿ. ನೆಮ್ಮದಿ ದೊರೆಯಲಿದೆ. ಶುಭದಿನ: 11. ಮಹಾಗಣಪತಿಗೆ ದೂರ್ವಾರ್ಚನೆ ಮಾಡಿರಿ.





ವಿದೇಶಗಳಲ್ಲಿ ಕಾರ್ಯ ನಿರ್ವಹಿಸಲು ಬಯಸಿದವರಿಗೆ ಶುಭ ಸುದ್ದಿ. ಆರ್ಥಿಕ ಹೂಡಿಕೆಗಳಿಗೆ ಉತ್ತಮ ಫಲಿತಾಂಶ ದೊರೆಯಲಿದೆ. ಪ್ರಾಮಾಣಿಕ ಪ್ರಯತ್ನ ಮಾಡಿದರೆ ಉತ್ತಮ ಫಲಿತಾಂಶ ದೊರೆಯುತ್ತದೆ. ನಿಮ್ಮ ಪ್ರತಿಸ್ಪರ್ಧಿಗಳ ವಿರುದ್ಧ ಕೈ ಮೇಲಾಗಲಿದೆ. ಸಂಗಾತಿಯಿಂದ ನಿರೀಕ್ಷೆ ಮಾಡಿದಂಥ ಬೆಂಬಲ ನಿಮಗೆ ದೊರೆಯುವುದಿಲ್ಲ. ಉಡುಗೊರೆ ಪಡೆಯುವ ಯೋಗವಿದೆ. ಶುಭದಿನ: 10. ಚಂಡಿ ಪಾರಾಯಣ ಮಾಡಿರಿ.





ಕೌಟುಂಬಿಕ ಜೀವನ ಚೆನ್ನಾಗಿ ಇರಬೇಕು ಎಂದು ಹೆಚ್ಚು ಶ್ರಮ ಹಾಕಿ ಕೆಲಸ ಮಾಡಲಿದ್ದೀರಿ. ಆರ್ಥಿಕ ಸ್ಥಿತಿ ಉತ್ತಮವಾಗಿ ಇರಲಿದೆ. ಸಂಗಾತಿ ಜತೆಗಿನ ಬಾಂಧವ್ಯ ಇನ್ನಷ್ಟು ಗಟ್ಟಿಯಾಗಲಿದೆ. ವ್ಯಾಪಾರ ವ್ಯವಹಾರಗಳು ಇದ್ದಲ್ಲಿ ಏಳ್ಗೆ ಕಾಣಿಸುವ ಸೂಚನೆ ದೊರೆಯುತ್ತದೆ. ಇತರರ ಮನಸಿಗೆ ಬೇಸರ ಆಗುವಂತೆ ಮಾತಾಡಬೇಡಿ. ಸಕಾರಾತ್ಮಕ ಬೆಳವಣಿಗೆಗಳು ಆಗಲಿವೆ. ಶುಭದಿನ: 14. ರಾಘವೇಂದ್ರ ಸ್ವಾಮಿಗಳ ಭಜನೆ ಮಾಡಿರಿ.




ಕೀರ್ತಿ ಗಳಿಸುವುದಕ್ಕೆ ಉತ್ತಮ ಅವಕಾಶಗಳಿವೆ. ಆರೋಗ್ಯವು ಸ್ಥಿರವಾಗಿರುತ್ತದೆ. ವೃತ್ತಿ ಬದುಕಿನ ನಿಮ್ಮ ಅನುಭವವನ್ನು ಸಹೋದ್ಯೋಗಿಗಳು ಮನಸಾರೆ ಹೊಗಳಲಿದ್ದಾರೆ. ಆರ್ಥಿಕ ಸ್ಥಿತಿ ಉತ್ತಮವಾಗಿರುತ್ತದೆ. ಜೀವನಶೈಲಿಯಲ್ಲಿ ಸಕಾರಾತ್ಮಕವಾದ ಬದಲಾವಣೆ ಕಾಣಲಿದ್ದೀರಿ. ಹಣ ಸಂಗ್ರಹಕ್ಕಾಗಿ ನೀವು ಹಾಕಿದ ಪ್ರಯತ್ನ ಫಲಿತಾಂಶ ನೀಡಲು ಆರಂಭಿಸುತ್ತದೆ. ಶುಭದಿನ: 12. ಕಾಲಭೈರವನ ಸೇವೆ ಮಾಡಿರಿ.




ಒಂದಿಲ್ಲೊಂದು ಕ್ರಿಯೇಟಿವ್ ಕೆಲಸದಲ್ಲಿ ತೊಡಗಿಕೊಳ್ಳಲಿದ್ದೀರಿ. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ನಿಮ್ಮ ಜ್ಞಾನವನ್ನು ಹೆಚ್ಚು ಮಾಡಿಕೊಳ್ಳುವುದಕ್ಕೆ ಪ್ರಯತ್ನ ಮಾಡಲಿದ್ದೀರಿ. ಸಹೋದ್ಯೋಗಿಗಳಿಗೆ ಅಗತ್ಯವಾದ ಬೆಂಬಲ, ಪ್ರೋತ್ಸಾಹ ನೀಡಲಿದ್ದೀರಿ. ಪೋಷಕರಿಗೆ ಅಗತ್ಯ ಇರುವ ಎಲ್ಲವನ್ನೂ ಪೂರೈಸುವ ನಿಟ್ಟಿನಲ್ಲಿ ಶ್ರಮ ಹಾಕಲಿದ್ದೀರಿ. ಶುಭದಿನ: 11. ವಿಷ್ಣು ಸಹಸ್ರನಾಮ ಓದಿರಿ.




ದೂರದ ಸ್ಥಳದಿಂದ ಶುಭ ವಾರ್ತೆ ಕೇಳಲಿದ್ದೀರಿ. ಹಣಕಾಸು ಹೂಡಿಕೆಯಿಂದ ಉತ್ತಮ ಲಾಭವಾಗಲಿದೆ. ಋತುಮಾನಕ್ಕೆ ತಕ್ಕ ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ಸಕಾರಾತ್ಮಕ ಫಲಿತಾಂಶವನ್ನು ನಿರೀಕ್ಷೆ ಮಾಡಬಹುದು. ವೃತ್ತಿ ಬದುಕನ್ನು ಆರಂಭ ಮಾಡಬೇಕಿರುವವರಿಗೆ ಉತ್ತಮ ಅವಕಾಶ ದೊರೆಯಲಿದೆ. ಹೆಚ್ಚಿನ ಜವಾಬ್ದಾರಿ ಅಥವಾ ಬಡ್ತಿ ದೊರೆಯುವ ಸಾಧ್ಯತೆಗಳಿವೆ. ಶುಭದಿನ: 13. ಶಿವಕವಚ ಪಠಿಸಿರಿ.